# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಕೋಲಾರ ಜಿಲ್ಲೆ, ಬಂಗಾರಪೇಟೆ ತಾಲ್ಲೂಕಿನ ಬೇತಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀ ಎಸ್.ಕಿರಣ್‌ಕುಮಾರ್ ರವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4). 48(5) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ಕೋಲಾರ ಇವರ ಪತ್ರ ಸಂಖ್ಯೆ: ಜಿ.ಪಂ.ಕೋ / ಪಶಾ / ಸಿಆರ್/ 48 / 2018-19 , ದಿನಾಂಕ:25/03/2019.
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1135/ಗ್ರಾಪಂಅ/2018, ದಿನಾಂಕ: 02/02/2019.
3) ವಿಚಾರಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರ ಕಾರಣ ಕೇಳುವ ನೋಟೀಸ್ ದಿನಾಂಕ: 17/05/2019
4) ಕೋಲಾರ ಜಿಲ್ಲೆ, ಬಂಗಾರಪೇಟೆ ತಾಲ್ಲೂಕಿನ ಬೇತಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀ ಎಸ್.ಕಿರಣ್ ಕುಮಾರ್ ರವರು ಕಾರಣ ಕೇಳುವ ನೊಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 03/06/2019.
5) ವಿಚಾರಣಾಧಿಕಾರಿಗಳ ವಿಚಾರಣಾ ವರದಿ ದಿನಾಂಕ: 21/01/2020.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಪತ್ರದಲ್ಲಿ ಕೋಲಾರ ಜಿಲ್ಲೆ, ಬಂಗಾರಪೇಟೆ ತಾಲ್ಲೂಕಿನ ಬೇತಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀ ಎಸ್.ಕಿರಣ್ ಕುಮಾರ್ ರವರು 2015 ನೇ ಸಾಲಿನ ಚುನಾವಣೆಗೆ ಸುಳ್ಳು ಜಾತಿ ಪ್ರಮಾಣ ಪತ್ರ ಹಾಜರುಪಡಿಸಿ ಚುನಾವಣೆಯಲ್ಲಿ ಆಯ್ಕೆಯಾಗಿದ್ದು, ಇವರು ತಮ್ಮ ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡು ಮೀನುಪಾರ್ಶವಾರ ಹಕ್ಕನ್ನು ಕಡಿಮೆ ಮೊತ್ತಕ್ಕೆ ನಿಗಧಿಪಡಿಸಿ ಗ್ರಾಮ ಪಂಚಾಯಿತಿಗೆ ರೂ-10.00 ಲಕ್ಷಗಳ ನಷ್ಟ ಉಂಟು ಮಾಡಿರುವುದಾಗಿ ಹಾಗೂ ಖಾಸಗಿ ಲೇಔಟ್‌ಗಳಿಗೆ ಗ್ರಾಮ ಪಂಚಾಯಿತಿಯ ಅನುಮೋದನೆ ಪಡೆಯದೆ ಅಕ್ರಮವಾಗಿ ರಸ್ತೆ ನಿರ್ಮಾಣ ಮಾಡಲು ಅಧಿಕಾರ ನೀಡಿದ್ದು, ಸರ್ಕಾರದ ಇ-ಸ್ವತ್ತಿನ ನಿಯಮಗಳನ್ನು ಉಲ್ಲಂಘಿಸಿರುವುದಕ್ಕೆ ಸಂಬಂಧಿಸಿದಂತೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4), 48(5) ರನ್ವಯ ಕ್ರಮಜರುಗಿಸುವ ಕುರಿತು ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ಕೋಲಾರ ಇವರು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಕಲಂ 43(ಎ)ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5)ರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳ ಮೇಲೆ ದಾಖಲಾಗುವ ದೂರುಗಳಿಗೆ ಸಂಬಂಧಿಸಿದಂತೆ ಅರೆನ್ಯಾಯಿಕ ಮಾದರಿಯಲ್ಲಿ ವಿಚಾರಣೆ ನಡೆಸುವ ಅಧಿಕಾರವನ್ನು ಸಂಬಂಧಿಸಿದ ಕಂದಾಯ ವಿಭಾಗಗಳ ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ವಿಚಾರಣಾಧಿಕಾರಿಗಳು ಬೇತಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀ ಎಸ್.ಕಿರಣ್ ಕುಮಾರ್ ರವರಿಗೆ ದೂರಿನ ಸಂಬಂಧ ವಿಚಾರಣ ದಿನಾಂಕದಂದು ಸಂಬಂಧಪಟ್ಟ ಎಲ್ಲಾ ಸಮರ್ಥನೀಯ ಅಗತ್ಯ ದಾಖಲೆಗಳೊಂದಿಗೆ ವಿಚಾರಣೆಗೆ ಹಾಜರಾಗಿ, ತಮ್ಮ ತಮ್ಮ ಲಿಖಿತ ಹೇಳಿಕೆಗಳನ್ನು ಸಲ್ಲಿಸುವಂತೆ ದಿನಾಂಕ: 17.05.2019 ರಂದು ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ, ದಿನಾಂಕ: 17.05.2019 ರಂದು ಜಾರಿಗೊಳಿಸಿದ್ದ ಕಾರಣ ಕೇಳುವ ನೋಟೀಸ್‌ಗೆ ಶ್ರೀ ಕಿರಣ್ ಕುಮಾರ್ ರವರು ದಿನಾಂಕ: 03.06.2019 ರಂದು ಈ ಕೆಳಕಂಡಂತೆ ಲಿಖಿತ ಹೇಳಿಕೆಗಳನ್ನು ಸಲ್ಲಿಸಿರುತ್ತಾರೆ:-

ಶ್ರೀ ಎಸ್.ಕಿರಣ್ ಕುಮಾರ್, ಅಧ್ಯಕ್ಷರು ಬೇತಮಂಗಲ ಗ್ರಾಮ ಪಂಚಾಯಿತಿರವರು ದಿನಾಂಕ: 03.06.2018 ರಂದು ಲಿಖಿತ ಸಮಜಾಯಿಸಿ ನೀಡಿ, 2015ನೇ ಸಾಲಿನಿಂದ ಈವರೆಗೆ ಸುಳ್ಳು ಜಾತಿ ಪ್ರಮಾಣ ಪತ್ರವನ್ನು ಪಡೆದು ಅಧ್ಯಕ್ಷನಾಗಿದ್ದೇನೆಂದು ನನ್ನ ವಿರುದ್ಧ ಅಧ್ಯಕ್ಷರ ಚುನಾವಣೆಯಲ್ಲಿ ಪರಾಭವಗೊಂಡ ಶ್ರೀಮತಿ ಜಯಮ್ಮ ಹಾಗೂ ಅವರ ಮಗ ಬಿ.ಎಂ.ರಮೇಶ್ (2010 ರಲ್ಲಿ ಜಾತಿ ಪ್ರಮಾಣ ಪತ್ರ ಪಡೆಯಲು ಸಾಕ್ಷಿದಾರ) ಹಾಗೂ ಕೆಲ ಅಧಿಕಾರಿಗಳು ಸೇರಿ ನನ್ನ ವಿರುದ್ಧ ದೋಷಾರೋಪ ಪಟ್ಟಿಯನ್ನು ನೀಡಿದ್ದರು. ಸದರಿ ಆರೋಪವನ್ನು ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ: 24.01.2019 ರಂದು ಸಂಖ್ಯೆ:855/2019ನೇ ಸಂಖ್ಯೆಯಂತೆ ರದ್ದು ಮಾಡಿರುತ್ತದೆ. ಅವಿಶ್ವಾಸದ ಮೂಲಕ ನನ್ನ ವಿರುದ್ಧ ಕೈಗೊಂಡ ನಿರ್ಣಯವು ಸೋಲು ಉಂಟಾಗಿದ್ದರಿಂದ ನನ್ನ ವಿರುದ್ಧ ಇಲ್ಲ ಸಲ್ಲದ ದೂರುಗಳನ್ನು ನಿಡುತ್ತಾ ಮಾನಸಿಕ ತೊಂದರೆಯನ್ನು ನೀಡುತ್ತಾ ಬಂದಿರುತ್ತಾರೆ. ಮೀನು ಪಾಶ್ವಾರು ಹಕ್ಕು ಎಂದು ನೀಡಿರುವ ದೂರು ಶುದ್ಧ ಸುಳ್ಳಿನಿಂದ ಕೂಡಿರುತ್ತದೆ. ಸರ್ವಸದಸ್ಯರ ಸಭೆಯಲ್ಲಿ ಮರು ಹರಾಜು ನೀಡಲು ಸರ್ವಸದಸ್ಯರು ಮುಂದಾದಾಗ ಈ ಮೊದಲು ಹರಾಜು ಪಡೆದಿದ್ದ ವ್ಯಕ್ತಿ ಶ್ರೀ ಗಾಲಿಬ್‌ಷರೀಫ್ ಎಂಬುವವರು ಮಾನ್ಯ ಉಚ್ಚ ನ್ಯಾಯಾಲಯದಿಂದ ತಡೆಯಾಜ್ಞೆಯನ್ನು ತಂದು ಪಂಚಾಯಿತಿಗೆ ನೀಡಿರುತ್ತಾರೆ. ಪಂಚಾಯಿತಿಯಲ್ಲಿ ಇ-ಸ್ವತ್ತು ಖಾತೆಗಳನ್ನು ಮಾಡಲು ನನ್ನ ಯಾವುದೇ ಹಸ್ತಕ್ಷೇಪ, ಸಹಿ/ಆದೇಶ ಇರುವುದಿಲ್ಲ. ಹಾಗೂ ನನ್ನ ಗಮನಕ್ಕೆ ಬಂದಿರುವುದಿಲ್ಲ. ಸಾರ್ವಜನಿಕರ ಅನುಕೂಲಕ್ಕಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ಸಮರ್ಪಕವಾಗಿ ರಸ್ತೆಗಳನ್ನು ನಿರ್ಮಿಸಲು ನಾವು ಮತ್ತು ತಾಂತ್ರಿಕ ವಿಭಾಗದ ಎಲ್ಲರ ಸಹಭಾಗಿತ್ವದಿಂದ ಸಹಕರಿಸಿರುತ್ತೇವೆ ಹೊರತು ಯಾರಿಗೋ ಒಬ್ಬ ವ್ಯಕ್ತಿಗೆ ಅನುಕೂಲಕರವಾಗುವಂತೆ ಎಲ್ಲೂ ಸಹ ಕಾನೂನನ್ನು ಉಲ್ಲಂಘಿಸಿರುವುದಿಲ್ಲ.

ಮೇಲೆ ಹೇಳಿದ ಎಲ್ಲಾ ವಿಷಯಗಳು ನನ್ನ ಮಟ್ಟಿಗೆ ಸತ್ಯವಾಗಿರುತ್ತದೆ. ಸುಳ್ಳೆಂದು ಕಂಡು ಬಂದಲ್ಲಿ ನನ್ನ ವಿರುದ್ಧ ಸಂಬಂಧಪಟ್ಟವರು ಕ್ರಮ ಜರುಗಿಸಬಹುದು ಎಂಬುದಾಗಿ ಲಿಖಿತ ಹೇಳಿಕೆ ನೀಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ವಿಚಾರಣಾಧಿಕಾರಿಗಳು ಶ್ರೀ ಕಿರಣ್ ಕುಮಾರ್, ಅಧ್ಯಕ್ಷರು, ಬೇತಮಂಗಲ ಗ್ರಾಮ ಪಂಚಾಯಿತಿ, ಬಂಗಾರಪೇಟೆ ತಾಲ್ಲೂಕು, ಕೋಲಾರ ಜಿಲ್ಲೆ ರವರ ವಿರುದ್ಧ ಇರುವ ದೂರಿನ ಬಗ್ಗೆ ದಿನಾಂಕ: 17.05.2019 ರಂದು ಕಾರಣ ಕೇಳಿ ನೋಟೀಸ್ ನೀಡಿ ಲಿಖಿತ ವಿವರಣೆ ನೀಡುವಂತೆ ತಿಳಿಸಲಾಗಿರುತ್ತದೆ. ಈ ಸಂಬಂಧ ದಿನಾಂಕ: 03.06.2019 ರಂದು ಲಿಖಿತ ಹೇಳಿಕೆ ನೀಡಿರುತ್ತಾರೆ. ಈ ವಿಚಾರದ ಬಗ್ಗೆ ದಿನಾಂಕ: 11.09.2019 ಹಾಗೂ ದಿನಾಂಕ: 23.09.2019 ರಂದು ವಿಚಾರಣೆ ನಡೆಸಲಾಗಿರುತ್ತದೆ. ಸದರಿಯವರ ವಿರುದ್ಧ ಇರುವ ದೂರಿನ ಬಗ್ಗೆ ಅವರು ನೀಡಿದ ಲಿಖಿತ ಹೇಳಿಕೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ನೀಡಿರುವ ವರದಿಯಿಂದ ಅವರ ಮೇಲಿರುವ ದೂರಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಜಾತಿ ಪರಿಶೀಲನಾ ಸಮಿತಿ, ಕೋಲಾರರವರ ನಡವಳಿಯ ಆದೇಶದ ಸಂಖ್ಯೆ: ಎಂಎಜಿ/ಸಿಆರ್-81/2018-19 ದಿನಾಂಕ:05.12.2018 ರಲ್ಲಿ ಶ್ರೀ ಕಿರಣ್ ಕುಮಾರ್‌ರವರು ಪರಿಶಿಷ್ಟ ಜಾತಿ " ಆದಿ ದ್ರಾವಿಡ" ಜಾತಿಗೆ ಸೇರಿಲ್ಲವೆಂದು ತೀರ್ಮಾನಿಸಿ ಆದೇಶಿಸಿರುತ್ತಾರೆ. ಸದರಿ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಜಾತಿ ಪರಿಶೀಲನಾ ಸಮಿತಿ, ಕೋಲಾರರವರ ಆದೇಶವನ್ನು ಪ್ರಶ್ನಿಸಿ ಮಾನ್ಯ ಘನ ಉಚ್ಚನ್ಯಾಯಾಲಯದಲ್ಲಿ ದಾವೆ ದಾಖಲಿಸಿದ್ದು ಮಾನ್ಯ ಘನ ಉಚ್ಚ ನ್ಯಾಯಾಲಯವು ದಿನಾಂಕ: 24.01.2019 ರಂದು ಸಂಖ್ಯೆ:855/2019(ಜೆಎಂಸಿಸಿ)ರ ಆದೇಶದಲ್ಲಿ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಜಾತಿ ಪರಿಶೀಲನಾ ಸಮಿತಿ, ಕೋಲಾರರವರ ನಡವಳಿಯ ಆದೇಶವನ್ನು ರದ್ದುಗೊಳಿಸಿ ಆದೇಶಿಸಿರುವುದು ಕಂಡುಬಂದಿರುತ್ತದೆ.

ಮೀನುಪಾಶ್ವಾರು ಹಕ್ಕಿಗೆ ಸಂಬಂಧಿಸಿದಂತೆ ಸರ್ವಸದಸ್ಯರ ಸಭೆಯಲ್ಲಿ ಮರುಹರಾಜು ನೀಡಲು ಸರ್ವಸದಸ್ಯರು ಮುಂದಾದಾಗ ಈ ಮೊದಲು ಹರಾಜು ಪಡೆದಿದ್ದ ವ್ಯಕ್ತಿ ಶ್ರೀ ಗಾಲಿಬ್‌ಷರೀಫ್ ಎಂಬುವವರು ಮಾನ್ಯ ಉಚ್ಚ ನ್ಯಾಯಾಲಯದಿಂದ ತಡೆಯಾಜ್ಞೆಯನ್ನು ತಂದು ಪಂಚಾಯಿತಿಗೆ ನೀಡಿರುವುದು ಕಂಡುಬಂದಿರುತ್ತದೆ. ಈ ಎರಡು ಪ್ರಕರಣಗಳಲ್ಲಿ ಘನ ನ್ಯಾಯಾಲಯದ ಆದೇಶ ಇರುವುದರಿಂದ ಸದರಿ ಆರೋಪಗಳ ಬಗ್ಗೆ ಪರಿಗಣಿಸಲು ಬರುವುದಿಲ್ಲ.

ಆದರೆ ಪರಿಶೀಲಿಸಿದಾಗ ಖಾಸಗಿ ಲೇಔಟ್‌ಗಳಿಗೆ ಗ್ರಾಮ ಪಂಚಾಯಿತಿಯ ಅನುಮೋದನೆ ಪಡೆಯದೆ ಅಕ್ರಮವಾಗಿ ರಸ್ತೆ ನಿರ್ಮಾಣ ಮಾಡಲು ಅಧಿಕಾರ ನೀಡಿರುವುದು, ಸರ್ಕಾರದ ಇ-ಸ್ವತಿನ ನಿಯಮಗಳನ್ನು ಉಲ್ಲಂಘಿಸಿ ಶ್ರೀ ಎಸ್.ಕಿರಣ್ ಕುಮಾರ್, ಅಧ್ಯಕ್ಷರು, ಬೇತಮಂಗಲ ಗ್ರಾಮ ಪಂಚಾಯಿತಿರವರು ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ಲೋಪ, ಅವ್ಯವಹಾರ ಮಾಡಿರುವುದು ಕಂಡುಬಂದಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4), 48(5) ರನ್ವಯ ಕ್ರಮ ಜರುಗಿಸಬಹುದಾಗಿರುತ್ತದೆ ಎಂದು ತಿಳಿಸುತ್ತಾ, ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳು, ವಿಚಾರಣಾಧಿಕಾರಿಗಳು ಸಲ್ಲಿಸಿರುವ ವಿಚಾರಣಾ ವರದಿಯಲ್ಲಿನ ಅಂಶಗಳು ಹಾಗೂ ಶ್ರೀ ಕಿರಣ್ ಕುಮಾರ್, ಬೇತಮಂಗಲ ಗ್ರಾಮ ಪಂಚಾಯಿತಿ ಅಧ್ಯಕ್ಷರು ನೀಡಿರುವ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಿದಾಗ ಬೇತಮಂಗಲ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀ ಕಿರಣ್ ಕುಮಾರ್ ರವರು ಗ್ರಾಮ ಪಂಚಾಯಿತಿಯಲ್ಲಿ ಅವ್ಯವಹಾರ ಮತ್ತು ಕರ್ತವ್ಯಲೋಪ ಮಾಡಿರುವುದು ವಿಚಾರಣಾಧಿಕಾರಿಗಳ ವರದಿಯಿಂದ ಸ್ಪಷ್ಟವಾಗಿ ಕಂಡುಬಂದಿರುವುದರಿಂದ ಬೇತಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀ ಕಿರಣ್ ಕುಮಾರ್ ಇವರ ಅಧ್ಯಕ್ಷ ಮತ್ತು ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ಸರ್ಕಾರವು ನಿರ್ಣಹಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/107/ಗ್ರಾಪಂಅ/2020**
**ಬೆಂಗಳೂರು, ದಿನಾಂಕ: 03ನೇ ಮಾರ್ಚ್ 2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕೋಲಾರ ಜಿಲ್ಲೆ, ಬಂಗಾರಪೇಟೆ ತಾಲ್ಲೂಕಿನ ಬೇತಮಂಗಲ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀ ಎಸ್.ಕಿರಣ್ ಕುಮಾರ್ ರವರು ಸರ್ಕಾರದ ಇ-ಸ್ವತ್ತಿನ ನಿಯಮಗಳನ್ನು ಉಲ್ಲಂಘಿಸಿ, ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ಲೋಪ, ಅವ್ಯವಹಾರ ಮಾಡಿರುವುದು ರುಜುವಾತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 48(4) ಮತ್ತು 48(5) ರನ್ವಯ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಮತ್ತು ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಿ ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 03/03/2020.
(ನವೀನ್ ಕುಮಾರ್.ಬಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
03/03/20

ಗೆ:

1. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಕೋಲಾರ ಜಿಲ್ಲೆ.
3. ಕಾರ್ಯನಿರ್ವಾಹಕ ಅಧಿಕಾರಿ, ಬಂಗಾರಪೇಟೆ ತಾಲ್ಲೂಕು ಪಂಚಾಯಿತಿ, ಕೋಲಾರ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬೇತಮಂಗಲ ಗ್ರಾಮ ಪಂಚಾಯಿತಿ, ಬಂಗಾರಪೇಟೆ ತಾಲ್ಲೂಕು, ಕೋಲಾರ ಜಿಲ್ಲೆ.
5. ಶ್ರೀ ಎಸ್. ಕಿರಣ್ ಕುಮಾರ್, ಬೇತಮಂಗಲ ಗ್ರಾಮ ಪಂಚಾಯಿತಿ, ಬಂಗಾರಪೇಟೆ ತಾಲ್ಲೂಕು, ಕೋಲಾರ ಜಿಲ್ಲೆ. **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಬಂಗಾರಪೇಟೆ, ಕೋಲಾರ ಜಿಲ್ಲೆ ಇವರ ಮುಖಾಂತರ)**
6. ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-1) ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.

****